ಕನ್ನಡ ಅಭಿವೃದ್ಧಿ ಪ್ರಾಧಿಕಾರ,

ವಿಧಾನಸೌಧ, ಬೆಂಗಳೂರು

ದಿನಾಂಕ:೧೯-೦೮-೨೦೨೦

:ಪ್ರಕಟಣೆಯ ಕೃಪೆಗಾಗಿ:

ಮಾನ್ಯರೆ,

**ಉನ್ನತ ಶಿಕ್ಷಣದಲ್ಲಿ ಸೀಟು ಪಡೆಯಲು ಕನ್ನಡ ಭಾಷಾ ಕೌಶಲ್ಯ ಆನ್‌ಲೈನ್ ಪರೀಕ್ಷೆ ಸಹಕಾರಿ: ಟಿ.ಎಸ್.ನಾಗಾಭರಣ**

**ವಿದೇಶಿ ಕನ್ನಡಿಗರೊಂದಿಗೆ ನಡೆದ ಸಭೆಯಲ್ಲಿ ಪ್ರಾಧಿಕಾರದ ಅಧ್ಯಕ್ಷರ ಅಭಿಮತ**

ಬೆಂಗಳೂರು: ಕನ್ನಡ ಭಾಷಾ ಕೌಶಲ್ಯ ಆನ್‌ಲೈನ್ ಪರೀಕ್ಷೆಗೆ ಸಂಬಂಧಿಸಿದಂತೆ ಪಠ್ಯಕ್ರಮ, ಪರೀಕ್ಷಾ ಕ್ರಮ, ಮೌಲ್ಯ ಮಾಪನ ಇತ್ಯಾದಿ ವಿಷಯಗಳಿಗೆ ಸಂಬಂಧಿಸಿದಂತೆ ವಿದೇಶಿ ಕನ್ನಡಿಗರೊಂದಿಗೆ ಜಾಲ ಸಂಪರ್ಕ ಸಭೆ (ಆನ್ ಲೈನ್ )ಯನ್ನು ನಡೆಸಲಾಯಿತು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಟಿ.ಎಸ್.ನಾಗಾಭರಣ ಅವರು ಮಾತನಾಡಿ, ವಿಶ್ವದ ಎಲ್ಲ ಮಾಹಿತಿಗಳನ್ನು ಕನ್ನಡಿಗರು ತಾಯ್ನುಡಿಯಲ್ಲಿ ತಿಳಿದುಕೊಳ್ಳುವುದು ಅವರ ಹಕ್ಕಾಗಿದ್ದು, ಆ ಹಕ್ಕನ್ನು ಕನ್ನಡಿಗರಿಗೆ ಒದಗಿಸಿಕೊಡುವ ನಿಟ್ಟಿನಲ್ಲಿ ಪ್ರಾಧಿಕಾರ ಶ್ರಮಿಸುತ್ತಿದೆ ಎಂದರು.

ಕನ್ನಡಿಗರು ಪ್ರಪಂಚದ ಯಾವುದೇ ಮೂಲೆಯಲ್ಲಿದ್ದರೂ ಅವರಿಗೆ ಕನ್ನಡದ ಪರಿಸರ ನಿರ್ಮಾಣ ಮಾಡುವುದು ನಮ್ಮ ಆಶಯವಾಗಿದೆ. ಜೊತೆಗೆ ಗಡಿನಾಡು ಹಾಗೂ ಹೊರದೇಶಗಳಲ್ಲಿ ನೆಲೆಸಿರುವ, ಕನ್ನಡ ಕಲಿತಿರುವ ಬಗ್ಗೆ ದೃಢೀಕರಣ ಪತ್ರವನ್ನು ಬಯಸುವವರಿಗೆ ಹಾಗೂ ಉನ್ನತ ಶಿಕ್ಷಣದಲ್ಲಿ ಸೀಟು ಪಡೆಯಲು ಮತ್ತು ಖಾಸಗಿ ವಲಯದಲ್ಲಿ ಕನ್ನಡಿಗರು ಉದ್ಯೋಗವನ್ನು ಪಡೆದುಕೊಳ್ಳುವ ನಿಟ್ಟಿನಲ್ಲಿ ಕನ್ನಡ ಭಾಷಾ ಕೌಶಲ್ಯ ಆನ್‌ಲೈನ್ ಪರೀಕ್ಷೆ ಹೆಚ್ಚು ಸಹಕಾರಿಯಾಗಲಿದ್ದು, ಇದರ ಸದುಪಯೋಗ ಪಡೆದುಕೊಳ್ಳುವಂತೆ ತಿಳಿಸಿದರು.

ಈ ರೀತಿಯ ಪರೀಕ್ಷೆಗಳನ್ನು ಮಾಡುವಾಗ ಕೆಲವು ಸಮಸ್ಯೆಗಳು ಎದುರಾಗಬಹುದು. ಆದರೆ ಕನ್ನಡಿಗರಿಗೆ ಉದ್ಯೋಗ ದೊರಕಿಸಿಕೊಡಲು ಪ್ರಾಧಿಕಾರ ಸಮಸ್ಯೆಗಳನ್ನು ಸವಾಲಾಗಿ ಸ್ವೀಕರಿಸಿ ಕಾರ್ಯನಿರ್ವಹಿಸುವುದಾಗಿ ಅಧ್ಯಕ್ಷರು ಹೇಳಿದರು.

ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಡಾ.ಕೆ.ಮುರಳಿಧರ ಅವರು ಮಾತನಾಡಿ, ಸರ್ಕಾರವು ಖಾಸಗಿ ವಲಯದ ಉದ್ಯೋಗಗಳಲ್ಲಿ ಕನ್ನಡಿಗರಿಗೆ ಪ್ರಾತಿನಿಧ್ಯ ನೀಡುವ ನೀತಿಯನ್ನು ರೂಪಿಸಿದೆ. ಹಾಗಾಗಿ ಆಸಕ್ತರು ಕನ್ನಡ ಭಾಷಾ ಕೌಶಲ್ಯ ಆನ್‌ಲೈನ್ ಪರೀಕ್ಷೆಯನ್ನು ಪಾಸುಮಾಡಿಕೊಂಡು ಉದ್ಯೋಗಿಗಳಾಗಿ ಕನ್ನಡ ನಾಡಿಗೆ ಸೇವೆ ಸಲ್ಲಿಸುವಂತೆ ಸಲಹೆ ನೀಡಿದರು.

ವಿಶ್ರಾಂತ ಕುಲಪತಿಗಳಾದ ಪ್ರೊ.ಹಿ.ಚಿ. ಬೋರಲಿಂಗಯ್ಯ ಅವರು ಮಾತನಾಡಿ, ದೇಶ, ವಿದೇಶಗಳಲ್ಲಿ ಹಾಗೂ ಹೊರರಾಜ್ಯಗಳಲ್ಲಿ ನೆಲೆಸಿರುವವರಿಗೆ ಈ ರೀತಿಯ ಕಲಿಕಾ ಪರೀಕ್ಷೆ ವಿಶೇಷವಾಗಿದೆ. ಇದರ ಜೊತೆಗೆ ಸಂವಹನಕ್ಕೆ ಸಹಕಾರಿಯಾಗಬಲ್ಲ ಹಾಗೂ ದಿನನಿತ್ಯ ಬಳಕೆಮಾಡುವ ಪದಗಳ ಕುರಿತ ಡಿಜಿಟಲ್ ಪದಕೋಶವೊಂದನ್ನು ರಚಿಸಿದರೆ ಹೊಸದಾಗಿ ಕನ್ನಡ ಕಲಿಯುವವರಿಗೆ ಉಪಯುಕ್ತವಾಗಲಿದೆ ಎಂದು ಅಭಿಪ್ರಾಯಪಟ್ಟರು.

ಪ್ರಾಧಿಕಾರದ ಸದಸ್ಯರಾದ ಅಬ್ದುಲ್ ರೆಹಮಾನ್ ಪಾಷಾ ಅವರು ಮಾತನಾಡಿ, ಪ್ರಸ್ತುತ ರಾಜ್ಯ ಸರ್ಕಾರದ ಪಠ್ಯಪುಸ್ತಕದಲ್ಲಿ ಭಾಷಾ ಕೌಶಲ್ಯ ಗೌಣವಾಗಿರುವುದನ್ನು ಕಾಣಬಹುದಾಗಿದೆ. ಹಾಗಾಗಿ ಪ್ರಾಧಿಕಾರ ನಡೆಸುವ ಕನ್ನಡ ಭಾಷಾ ಕೌಶಲ್ಯ ಆನ್‌ಲೈನ್ ಪರೀಕ್ಷೆಯ ಪಠ್ಯಕ್ರಮವನ್ನು ವಿಶೇಷ ರೀತಿಯಲ್ಲಿ ಮತ್ತು ಕೌಶಲ್ಯಾಧಾರಿತವಾಗಿರುವ ನಿಟ್ಟಿನಲ್ಲಿ ಪಠ್ಯಕ್ರಮ ರಚನೆಯಾಗಬೇಕಿದೆ ಎಂದು ಸಲಹೆ ನೀಡಿದರು.

ಪ್ರಾಧಿಕಾರದ ಮತ್ತೊರ್ವ ಸದಸ್ಯರಾದ ಕಬ್ಬಿನಾಲೆ ವಸಂತ ಭಾರದ್ವಾಜ್ ಅವರು ಮಾತನಾಡಿ, ಆನ್‌ಲೈನ್ ಪರೀಕ್ಷಾ ಪಠ್ಯಕ್ರಮದಲ್ಲಿ ಪ್ರಾದೇಶಿಕತೆಗೆ ಒತ್ತು ನೀಡಬೇಕು ಹಾಗೂ ಸರಳ ಕನ್ನಡ, ಆಡಳಿತ ಕನ್ನಡ, ನಿತ್ಯ ಬಳಕೆಗೆ ಬೇಕಾಗುವ ಕನ್ನಡದ ಜೊತೆಗೆ ಕಲಿಕೆಯಲ್ಲಿ ಶಿಶುಗೀತೆಗಳನ್ನು ಅವಳಸಿಕೊಂಡರೆ ಕಲಿಕೆಗೆ ಸಹಕಾರಿಯಾಗಲಿದೆ ಎಂದರು.

ಅಮೆರಿಕಾದ ನಲಿಕಲಿ ಅಕಾಡೆಮಿಯ ಅರುಣ್ ಸಂಪತ್, ಸಿಡ್ನಿಯ ಕನಕಾಪುರ ನಾರಾಯಣ, ಸಿಂಗಾಪುರದ ರಾಮನಾಥ್, ವೆಂಕಟ್, ಸ್ವೀಡನ್ ಶಿಕ್ಷಕಿ ವಿಜಯಲಕ್ಷ್ಮಿ, ಅಮೆರಿಕಾದ ರಾಜೇಶ್, ತಂತ್ರಾಂಶ ತಜ್ಞ ಮಧು ಜ್ಞಾನೇಶ್ವರ್, ಶಿಕ್ಷಣ ತಜ್ಞ ನಿರಂಜನಾರಾಧ್ಯ, ಜೈನ್ ಕಾಲೇಜಿನ ಕನ್ನಡ ವಿಭಾಗದ ಮುಖ್ಯಸ್ಥೆ ರಾಜೇಶ್ವರಿ, ನಲಿ-ಕಲಿ ಸಂಪನ್ಮೂಲ ವ್ಯಕ್ತಿ ಆರ್.ಡಿ.ರವೀಂದ್ರ, ಪ್ರಾಧಿಕಾರದ ಸದಸ್ಯರಾದ ಗುಬ್ಬಿಗೂಡು ರಮೇಶ್, ಅಮೆರಿಕಾದ ಮಧು ರಂಗಪ್ಪಗೌಡ ಹೀಗೆ ಹಲವು ಮಂದಿ ಅತಿಥಿಗಳು ಸಭೆಯಲ್ಲಿ ಪಾಲ್ಗೊಂಡು ಸಲಹೆ-ಸೂಚನೆಗಳನ್ನು ನೀಡಿ, ಇಂತಹ ವಿಶೇಷ ಸಭೆಯನ್ನು ಆಯೋಜಿಸಿದ ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ವಿದೇಶಿ ಕನ್ನಡಿಗರು ಮೆಚ್ಚುಗೆ ವ್ಯಕ್ತಪಡಿಸಿದರು.

(ಈ ಮಾಹಿತಿಯನ್ನು ತಮ್ಮ ಘನ ಪತ್ರಿಕೆಯಲ್ಲಿ ವರದಿ ಮಾಡಿ ಸಹಕಾರ ನೀಡುವಂತೆ ಕೋರಿಕೆ)

# ಉನ್ನತ ಶಿಕ್ಷಣದಲ್ಲಿ ಸೀಟು ಪಡೆಯಲು ಕನ್ನಡ ಭಾಷಾ ಕೌಶಲ್ಯ ಆನ್‌ಲೈನ್ ಪರೀಕ್ಷೆ ಸಹಕಾರಿ

ಬೆಂಗಳೂರು,ಆ.19- ಕನ್ನಡ ಭಾಷಾ ಕೌಶಲ್ಯ ಆನ್‌ಲೈನ್ ಪರೀಕ್ಷೆಗೆ ಸಂಬಂಧಿಸಿದಂತೆ ಪಠ್ಯಕ್ರಮ, ಪರೀಕ್ಷಾ ಕ್ರಮ, ಮೌಲ್ಯಮಾಪನ ಇತ್ಯಾದಿ ವಿಷಯಗಳಿಗೆ ಸಂಬಂಧಿಸಿದಂತೆ ವಿದೇಶಿ ಕನ್ನಡಿಗರೊಂದಿಗೆ ಜಾಲ ಸಂಪರ್ಕ ಸಭೆ (ಆನ್‌ಲೈನ್ )ಯನ್ನು ನಡೆಸಲಾಯಿತು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಟಿ.ಎಸ್.ನಾಗಾಭರಣ ಮಾತನಾಡಿ, ವಿಶ್ವದ ಎಲ್ಲ ಮಾಹಿತಿಗಳನ್ನು ಕನ್ನಡಿಗರು ತಾಯ್ನಾಡಿನಲ್ಲಿ ತಿಳಿದುಕೊಳ್ಳುವುದು ಅವರ ಹಕ್ಕಾಗಿದ್ದು, ಆ ಹಕ್ಕನ್ನು ಕನ್ನಡಿಗರಿಗೆ ಒದಗಿಸಿಕೊಡುವ ನಿಟ್ಟಿನಲ್ಲಿ ಪ್ರಾಧಿಕಾರ ಶ್ರಮಿಸುತ್ತಿದೆ ಎಂದರು.

ಕನ್ನಡಿಗರು ಪ್ರಪಂಚದ ಯಾವುದೇ ಮೂಲೆಯಲ್ಲಿದ್ದರೂ ಅವರಿಗೆ ಕನ್ನಡದ ಪರಿಸರ ನಿರ್ಮಾಣ ಮಾಡುವುದು ನಮ್ಮ ಆಶಯವಾಗಿದೆ. ಜೊತೆಗೆ ಗಡಿನಾಡು ಹಾಗೂ ಹೊರದೇಶಗಳಲ್ಲಿ ನೆಲೆಸಿರುವ, ಕನ್ನಡ ಕಲಿತಿರುವ ಬಗ್ಗೆ ದೃಢೀಕರಣ ಪತ್ರವನ್ನು ಬಯಸುವವರಿಗೆ ಹಾಗೂ ಉನ್ನತ ಶಿಕ್ಷಣದಲ್ಲಿ ಸೀಟು ಪಡೆಯಲು ಮತ್ತು ಖಾಸಗಿ ವಲಯದಲ್ಲಿ ಕನ್ನಡಿಗರು ಉದ್ಯೋಗವನ್ನು ಪಡೆದುಕೊಳ್ಳುವ ನಿಟ್ಟಿನಲ್ಲಿ ಕನ್ನಡ ಭಾಷಾ ಕೌಶಲ್ಯ ಆನ್‌ಲೈನ್ ಪರೀಕ್ಷೆ ಹೆಚ್ಚು ಸಹಕಾರಿಯಾಗಲಿದ್ದು, ಇದರ ಸದುಪಯೋಗ ಪಡೆದುಕೊಳ್ಳುವಂತೆ



ತಿಳಿಸಿದರು.

ಈ ರೀತಿಯ ಪರೀಕ್ಷೆಗಳನ್ನು ಮಾಡುವಾಗ ಕೆಲವು ಸಮಸ್ಯೆಗಳು ಎದುರಾಗಬಹುದು. ಆದರೆ ಕನ್ನಡಿಗರಿಗೆ ಉದ್ಯೋಗ ದೊರಕಿಸಿಕೊಡಲು ಪ್ರಾಧಿಕಾರ ಸಮಸ್ಯೆಗಳನ್ನು ಸವಾಲಾಗಿ ಸ್ವೀಕರಿಸಿ ಕಾರ್ಯನಿರ್ವಹಿಸುವುದಾಗಿ ಅಧ್ಯಕ್ಷರು ಹೇಳಿದರು.

ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಡಾ.ಕೆ.ಮುರಳೀಧರ ಮಾತನಾಡಿ, ಸರ್ಕಾರವು ಖಾಸಗಿ ವಲಯದ ಉದ್ಯೋಗಗಳಲ್ಲಿ ಕನ್ನಡಿಗರಿಗೆ ಪ್ರಾತಿನಿಧ್ಯ ನೀಡುವ ನೀತಿಯನ್ನು ರೂಪಿಸಿದೆ. ಹಾಗಾಗಿ ಆಸಕ್ತರು ಕನ್ನಡ ಭಾಷಾ ಕೌಶಲ್ಯ ಆನ್‌ಲೈನ್ ಪರೀಕ್ಷೆಯನ್ನು ಪಾಸುಮಾಡಿ ಕೊಂಡು ಉದ್ಯೋಗಿಗಳಾಗಿ ಕನ್ನಡ ನಾಡಿಗೆ ಸೇವೆ ಸಲ್ಲಿಸುವಂತೆ ಸಲಹೆ ನೀಡಿದರು.

ವಿಶ್ರಾಂತ ಕುಲಪತಿಗಳಾದ ಪ್ರೊ.ಹಿ.ಚಿ.ಬೋರಲಿಂಗಯ್ಯ ಮಾತನಾಡಿ, ದೇಶ, ವಿದೇಶಗಳಲ್ಲಿ ಹಾಗೂ ಹೊರರಾಜ್ಯಗಳಲ್ಲಿ ನೆಲೆಸಿರುವವರಿಗೆ ಈ ರೀತಿಯ ಕಲಿಕಾ ಪರೀಕ್ಷೆ ವಿಶೇಷವಾಗಿದೆ. ಇದರ ಜೊತೆಗೆ ಸಂದರ್ಭಕ್ಕೆ ಸಹಕಾರಿಯಾಗಬಲ್ಲ ಹಾಗೂ ದಿನನಿತ್ಯ ಬಳಕೆಮಾಡುವ ಪದಗಳ ಕುರಿತ ಡಿಜಿಟಲ್ ಪದಕೋಶವೊಂದನ್ನು ರಚಿಸಿದರೆ ಹೊಸದಾಗಿ ಕನ್ನಡ ಕಲಿಯುವವರಿಗೆ ಉಪಯುಕ್ತವಾಗಲಿದೆ ಎಂದು ಅಭಿಪ್ರಾಯಪಟ್ಟರು.

ಪ್ರಾಧಿಕಾರದ ಸದಸ್ಯರಾದ ಅಬ್ದುಲ್ ರೆಹಮಾನ್ ಪಾಷಾ ಮಾತನಾಡಿ, ಪ್ರಸ್ತುತ ರಾಜ್ಯ ಸರ್ಕಾರದ ಪಠ್ಯಪುಸ್ತಕದಲ್ಲಿ ಭಾಷಾ ಕೌಶಲ್ಯ ಗೌಣವಾಗಿರುವುದನ್ನು ಕಾಣಬಹುದಾಗಿದೆ. ಹಾಗಾಗಿ ಪ್ರಾಧಿಕಾರ ನಡೆಸುವ ಕನ್ನಡ ಭಾಷಾ ಕೌಶಲ್ಯ ಆನ್‌ಲೈನ್ ಪರೀಕ್ಷೆಯ ಪಠ್ಯಕ್ರಮವನ್ನು ವಿಶೇಷ ರೀತಿಯಲ್ಲಿ ಮತ್ತು ಕೌಶಲ್ಯಾಧಾರಿತವಾಗಿರುವ ನಿಟ್ಟಿನಲ್ಲಿ ಪಠ್ಯಕ್ರಮ ರಚನೆಯಾಗಬೇಕಿದೆ ಎಂದು ಸಲಹೆ ನೀಡಿದರು.

ಪ್ರಾಧಿಕಾರದ ಸದಸ್ಯರಾದ ಕಬ್ಬಿನಾಲೆ ವಸಂತ ಭಾರದ್ವಾಜ್ , ಅಮೆರಿಕಾದ ನಲಿಕಲಿ ಅಕಾಡೆಮಿಯ ಅರುಣ್ ಸಂಪತ್, ಸಿಡ್ನಿಯ ಕನಕಾಪುರ ನಾರಾಯಣ, ಸಿಂಗಾಪುರದ ರಾಮನಾಥ್, ವೆಂಕಟ್, ಸ್ವೀಡನ್ ಶಿಕ್ಷಕಿ ವಿಜಯಲಕ್ಷ್ಮಿ, ಅಮೆರಿಕಾದ ರಾಜೇಶ್, ತಂತ್ರಾಂಶ ತಜ್ಞ ಮಧು ಪ್ರಾಣೇಶ್ವರ್, ಶಿಕ್ಷಣ ತಜ್ಞ ನಿರಂಜನಾರಾಧ್ಯ ಮತ್ತಿತರರು ಹಾಜರಿದ್ದರು.